# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸಕಾಅ/ವಾ.ನಂ.39/ಪಿಆರ್/ 01 /2020-21

ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ
ಪೀಣ್ಯ ಕೈಗಾರಿಕಾ ಪ್ರದೇಶ ಉಪವಿಭಾಗ, ದಾಸರಹಳ್ಳಿ ವಲಯ
ಹೆಚ್.ಎಂ.ಟಿ.ಬಡಾವಣೆ, ನಾಗಸಂದ್ರ ಪೋಸ್ಟ್
ಬೆಂಗಳೂರು, ದಿನಾಂಕ 06/04/21

ವಾರ್ಡ್-39ರ ವಾರ್ಡ್ ಸಭೆಯ ನಡವಳಿ

ದಿನಾಂಕ:-03-04-2021 ರಂದು ಪೀಣ್ಯ ಕೈಗಾರಿಕ ಪ್ರದೇಶ ಉಪ ವಿಭಾಗ ವಾರ್ಡ್ ನಂ.39 ರ ವಾರ್ಡ್ ಕಛೇರಿಯಲ್ಲಿ ಶ್ರೀ.ಶಿವಕುಮಾರ್, ವಾರ್ಡ್-39 ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿಗಳು.

ಹಾಜರಿದ್ದವರು:

1. ಶ್ರೀ ಹೆಚ್.ಶಿವಕುಮಾರ್, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು
2. ಶ್ರೀಮತಿ.ಅರ್ಚನ, ಸಹಾಯಕ ಅಭಿಯಂತರರು ಮತ್ತು ಕಾರ್ಯದರ್ಶಿ
3. ಶ್ರೀ. ಸಮ್ಮಿಉಲ್ಲಾ,ತೋಟಗಾರಿಕೆ ಇಲಾಖೆ
4. ಶ್ರೀ.ರಾಮಕೃಷ್ಣ ಕಂದಾಯ ಪರಿವೀಕ್ಷಕರು ವಾ.ನಂ.39
5. ಶ್ರೀ. ನಂಜುಡಪ್ಪ,ಹಿರಿಯ ಆರೋಗ್ಯ ಪರಿವೀಕ್ಷಕರು
6. ಶ್ರೀ. ಸಿ.ಬಿ ಕೃಷ್ಣಪ್ಪ ಅರಣ್ಯ ಇಲಾಖೆ, ದಾಸರಹಳ್ಳಿ ವಲಯ

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

ಹಿಂದಿನ ಸಭೆಯ ನಡವಳಿಗಳನ್ನು ಓದಿ ರೆಕಾರ್ಡ್ ಮಾಡಲಾಯಿತು. D.W.C.C. ಸೆಂಟರ್‌ನಲ್ಲಿ ಶೌಚಾಲಯ ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಲು ತುರ್ತಾಗಿ ಕ್ರಮವಹಿಸುವಂತೆ ತಿಳಿಸಲಾಯಿತು.

- ಕೋವಿಡ್ 2019 ರ ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ಮುಂಜಾಗೃತ ಕ್ರಮಗಳ ಬಗ್ಗೆ ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರು ಶ್ರೀ. ನಂಜುಡಪ್ಪರವರು ಸಭೆಗೆ ಮಾಹಿತಿಯನ್ನು ವಿವರಿಸುತ್ತಾ ಕೋವಿಡ್ 2019 ನ್ನು ತಡೆಗಟ್ಟಲು ಜನರಿಗೆ Sanitise & Social Distance ಬಗ್ಗೆ ಹಾಗೂ ಮಾಸ್ಕ್ ಹಾಕದವರಿಗೆ ಮಾರ್ಷಲ್ ರವರು ಪೆನಾಲ್ಟಿ ಹಾಕಲಾಗುತ್ತಿದೆ. ಅಪಾರ್ಟ್‌ಮೆಂಟ್ ಕಾರ್ಖಾನೆಗಳಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಕೋವಿಡ್ ಟೆಸ್ಟ್‌ನ್ನು ಮಾಡಲಾಗುತ್ತಿದೆ. ಅದರಂತೆ ವ್ಯಾಕ್ಸಿನೇಶನ್ ಸಹ ಆಸ್ಪತ್ರೆಯಲ್ಲಿ ಮಾಡಲಾಗುತ್ತಿದೆ. ಹಾಗೂ ಕರೋನಾ ನಿಯಂತ್ರಣಕ್ಕೆ ಜನಸಂದಣಿ ಸೇರುವ ಸ್ಥಳದಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಕರೋನಾ ವಿಷಯದ ಬಗ್ಗೆ ಯಾವುದೇ ಕರೆ ಬಂದರೆ ತಕ್ಷಣ, ಸ್ಪಂದಿಸಲಾಗುವುದು. ಆಂಬುಲೆನ್ಸ್ ಸಹ ಸನ್ನದ್ಧ ಸ್ಥಿತಿಯಲ್ಲಿರುತ್ತದೆ.
- ವಿವಿಧ ಕಾಮಗಾರಿಗಳ ಅಭಿವೃದ್ಧಿ ಬಗ್ಗೆ ವಾಡ್‌ನಲಿ ರಸ್ತೆ ಗುಂಡಿ ಮುಚ್ಚುವ ಪ್ರಗತಿಯಲ್ಲಿದ್ದು ಮಾರುತಿ ಬಡಾವಣೆ, ಬೆಲಾರ್ ಬಡಾವಣೆ, ಬೆಲ್ಮಾರ್ ಲೇಔಟ್, ನೆಲಗದರನಹಳ್ಳಿ ರಸ್ತೆಯ ಪಕ್ಕದ ಚರಂಡಿಯ ಹೂಳು ತೆಗೆಯುವ ಕೆಲಸ ಪ್ರಗತಿಯಲ್ಲಿರುತ್ತದೆ. ಎಂದು ಸಭೆಯಲ್ಲಿ ಹಾಜರಿದ್ದ ವಾರ್ಡ್ ಇಂಜಿನಿಯರ್ ಸಭೆಗೆ ಮಾಹಿತಿನೀಡಿದರು.
- ವಾರ್ಡ್‌ನ ಕುಂದುಕೊರತೆಗಳ ಬಗ್ಗೆ:-ವಾರ್ಡಿನಲ್ಲಿ ಬರುವ ದೂರುಗಳನ್ನು ರಿಜಿಸ್ಟರ್‌ನಲ್ಲಿ ನಮೂದಿಸಲಾಗುತ್ತಿದೆ ಆದ್ಯತೆ ಮೇರೆಗೆ ದೂರನ್ನು ವಿಲೇ ಪಡಿಸಲಾಗುತ್ತಿದೆ ಎಂದು ಸಭೆಗೆ ವಾರ್ಡ್ ಇಂಜಿನಿಯರ್‌ರವರು ತಿಳಿಸಿರುತ್ತಾರೆ.
- ಉದ್ಯಾನವನಗಳ ನಿರ್ವಹಣೆ ಬಗ್ಗೆ:-ಸಭೆಗೆ Samuel ರವರು ಹಾಜರಾಗಿ ಉದ್ಯಾನವನಗಳ ನಿರ್ವಹಣೆ ಬಗ್ಗೆ ಮಾಹಿತಿ ನೀಡಿದರು. ಉದ್ಯಾನವನಗಳಲ್ಲಿ ಉತ್ಪತ್ತಿಯಾಗುವ ಹಸಿಕಸವನ್ನು ಕಂಪೋಸ್ಟ್ ಮಾಡುವಂತೆ ನೋಡೆಲ್ ಅಧಿಕಾರಿಗಳು ತಿಳಿಸಿದರು.
- ರಸ್ತೆಗುಂಡಿ ಮುಚ್ಚುವ ಬಗ್ಗೆ:-ವಾರ್ಡ್‌ನ ಇಂಜಿನಿಯರ್ ರವರು ಸಭೆಗೆ ಮಾಹಿತಿ ನೀಡುತ್ತಾ ಕೆಲವೊಂದು ಕಾಮಗಾರಿಗಳು ನಡೆಯುತ್ತಿದ್ದು ಯಾವುದೇ ಹೊಸ ಕಾಮಗಾರಿ ಇರುವುದಿಲ್ಲ. ಎಂದು ಸಭೆಗೆ ವಾರ್ಡಿನ ಇಂಜಿನಿಯರ್‌ಮಾಹಿತಿ ನೀಡಿದರು.

ಮು.ಪು.ನೋ

Scanned By Scanner Go

- BWSSB - ಸಭೆಗೆ ಗೈರುಹಾಜರಾಗಿದ್ದು ಮುಂದಿನ ಸಭೆಗೆ ತಪ್ಪದೆ ಹಾಜರಾಗುವಂತೆ ನೋಟೀಸ್ ನೀಡುವಂತೆ ನೋಡೆಲ್ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.
- BESCOM - ಸಭೆಗೆ ಗೈರುಹಾಜರಾಗಿದ್ದು ಮುಂದಿನ ಸಭೆಗೆ ತಪ್ಪದೆ ಹಾಜರಾಗುವಂತೆ ನೋಟೀಸ್ ನೀಡುವಂತೆ ನೋಡೆಲ್ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.
- ಬೃಹತ್ ನೀರುಗಾಲುವೆ ನಿರ್ವಹಣೆ:-ಬೆಲ್ಲಾರ್ ಲೇಔಟ್‌ನಲ್ಲಿ ಪ್ರತಿಬಾರಿನ ಮಳೆಗಾಲದಲ್ಲಿ ಮಳೆನೀರು ಜನವಸತಿ ಪ್ರದೇಶಕ್ಕೆ ಬರುತ್ತಿದ್ದು ಇದನ್ನು ತಡೆಗಟ್ಟುವ ಸಲುವಾಗಿ RCC Retaining wall ನಿರ್ಮಿಸುವ ಕೆಲಸ ಪ್ರಗತಿಯಲ್ಲಿರುತ್ತದೆ. ಎಂದು ನೋಡೆಲ್ ಅಧಿಕಾರಿ ಸಭೆಗೆ ಮಾಹಿತಿ ನೀಡಿದರು.

ಅಂತಿಮವಾಗಿ ನೋಡಲ್ ಅಧಿಕಾರಿಗಳು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡ ಎಲ್ಲಾ ಇಲಾಖೆಗಳ ಸಮನ್ವಯದಿಂದ ಕೆಲಸ ನಿರ್ವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 39 ಚೊಕ್ಕಸಂದ್ರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ. 39 ಚೊಕ್ಕಸಂದ್ರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧಿಕಾರಿಗಳ ಮಾಹಿತಿಗಾಗಿ

1. ಮಾನ್ಯ ಶಾಸಕರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
2. ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3. ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
4. ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
5. ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪೀ.ಕೈ.ಪ್ರ)ರವರ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ) ರವರ ಮಾಹಿತಿಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು (SWD) ರವರ ಮಾಹಿತಿಗಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು (BWSSB)ರವರ ಮಾಹಿತಿಗಾಗಿ ಕಳುಹಿಸಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ರವರ ಮಾಹಿತಿಗಾಗಿ ಕಳುಹಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನೆ) ರವರ ಮಾಹಿತಿಗಾಗಿ ಕಳುಹಿಸಿದೆ.
12. ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಎನ್-5 ಪೀಣ್ಯ ರವರ ಮಾಹಿತಿಗಾಗಿ ಕಳುಹಿಸಿದೆ.

Scanned By Scanner Go